# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 328(426) |
| ವಿಧಾನ ಪರಿಷತ್ ಸದಸ್ಯರ ಹೆಸರು | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10-03-2025. |
| ಉತ್ತರಿಸಬೇಕಾದ ಸಚಿವರು | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳಿಗೆ ಅಗತ್ಯವಿರುವ ಸಹಾಯಕ ಪ್ರಾಧ್ಯಾಪಕರು ಮತ್ತು ಶುಶ್ರೂಷಕ ಅಧಿಕಾರಿಗಳನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ: | ಹೌದು. |
| ಆ) | ಇದ್ದಲ್ಲಿ, ಖಾಲಿ ಇರುವ ಒಟ್ಟು ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಉದ್ದೇಶಿಸಲಾಗಿದೆ: (ವಿವರ ನೀಡುವುದು) | ಖಾಲಿ ಇರುವ ಒಟ್ಟು ಹುದ್ದೆಗಳ ಪೈಕಿ 682 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಹಾಗೂ 724 ಶುಶ್ರೂಷಾಧಿಕಾರಿಗಳ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಸಹಮತಿ ಪಡೆದು ಭರ್ತಿ ಮಾಡಲು ಉದ್ದೇಶಿಸಲಾಗಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೆನಿ 2024, ದಿನಾಂಕ:25-11-2025ರಲ್ಲಿ ಒಳಮೀಸಲಾತಿ ಅನ್ವಯವಾಗುವ ವೃಂದಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣ ದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆವಿಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಸ್ವಾಯತ್ತ ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ. |
| ಇ) | ಈ ಹಿಂದೆ ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರ ನೇತೃತ್ವದ ಸಮಿತಿಗಳೇ ಸಹಾಯಕ ಪ್ರಾಧ್ಯಾಪಕರು ಮತ್ತು ಶುಶ್ರೂಷಕ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳುತ್ತಿದ್ದ ಮಾದರಿಯಲ್ಲಿ ನೇಮಕಾತಿ ಪ್ರಕ್ರಿಯೆ ನಡೆಯಲಿದೆಯೇ ಅಥವಾ ನೇಮಕಾತಿಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ದೃಷ್ಟಿಯಿಂದ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದೇ: (ವಿವರ ನೀಡುವುದು) | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿಬರುವ ಸ್ವಾಯತ್ತ ಸಂಸ್ಥೆಗಳ ಬೈಲಾದನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಆಯ್ಕೆ ಸಮಿತಿಯ ಅಧ್ಯಕ್ಷರಾಗಿರುತ್ತಾರೆ.<br><br>ಗ್ರೂಪ್ "ಸಿ" & "ಡಿ" ಹುದ್ದೆಗಳ ನೇಮಕಾತಿಗೆ ಸಂಸ್ಥೆಯ ನಿರ್ದೇಶಕರು ಆಯ್ಕೆ ಸಮಿತಿಯ ಅಧ್ಯಕ್ಷರಾಗಿರುತ್ತಾರೆ.<br><br>ಅದರಂತೆ ಸ್ವಾಯತ್ತ ಸಂಸ್ಥೆಗಳ ಬೈಲಾ/ಸಿ&ಆರ್/ಎನ್‌ಎಂಸಿ ಮಾರ್ಗಸೂಚಿಗಳನ್ವಯ ಅತ್ಯಾವಶ್ಯಕವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು. |

| | | |
|---|---|---|
| ಈ) | ಸ್ಪರ್ಧಾತ್ಮಕ ಪರೀಕ್ಷೆ ಮೂಲಕವೇ ನೇಮಕಾತಿ ಪ್ರಕ್ರಿಯೆ ಆರಂಭಿಸಿದರೆ ಬೈಲಾಗೆ ತಿದ್ದುಪಡಿ ತರುವುದು, ಸಿ & ಆರ್ ನಿಯಮಗಳ ಪಾಲನೆ, ಪರೀಕ್ಷೆಗಳಿಗೆ ಅಗತ್ಯ ಪಠ್ಯಕ್ರಮ ರೂಪಿಸುವುದು ಸೇರಿದಂತೆ ಹಲವಾರು ಕ್ರಮಗಳನ್ನು ಅನುಸರಿಸಬೇಕಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣ ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| ಉ) | ಸ್ಪರ್ಧಾತ್ಮಕ ಪರೀಕ್ಷೆಯನ್ನು ಕೆ.ಪಿ.ಎಸ್.ಸಿ. ಅಥವಾ ಕೆ.ಇ.ಎ. ಮೂಲಕ ನಡೆಸುವ ಕುರಿತು ಚಿಂತಿಸಿದೆಯೇ? (ವಿವರ ನೀಡುವುದು) | ಆಯಾ ಸಂಸ್ಥೆಗಳ ಅಗತ್ಯತೆಗನುಗುಣವಾಗಿ ಬೈಲಾದಲ್ಲಿ ನೀಡಿರುವ ಅವಕಾಶದನ್ವಯ ಕ್ರಮವಹಿಸಲಾಗುವುದು. |

**ಸಂಖ್ಯೆ:ಎಂಇಡಿ 188 ಎಂಪಿಎಸ್ 2025**

**(ಡಾ:ಶರಣ ಪ್ರಕಾಶ ಆರ್. ಪಾಟೀಲ)**
ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಸಚಿವರು